# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Sri Kumaraswamy Mineral Exports Private Limited ಕಂಪನಿಗೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕಡೇಕೊಪ್ಪ ಗ್ರಾಮದಲ್ಲಿ 2.1 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :**
1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/ 08/SKMEPL – 2.1 MW/Koppal/F-133(2022)/2023/0677, ದಿನಾಂಕ:01.03.2023.
2) ದಿನಾಂಕ:04.03.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡಾವಳಿ.
3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

ನವೀಕರಿಸಬಹುದಾದ ಇಂಧನ ಅಭಿವೃದ್ಧಿ ... ಬೆಂಗಳೂರು
ಸಂ. 884
ದಿನಾಂಕ 17/3/23
920

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ. (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Sri Kumaraswamy Mineral Exports Private Limited ಕಂಪನಿಗೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕಡೇಕೊಪ್ಪ ಗ್ರಾಮದಲ್ಲಿ 2.1 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 05 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Sri Kumaraswamy Mineral Exports Private Limited ದಿನಾಂಕ:02.06.2010ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ಬೆಂಗಳೂರಿನಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯ ನೆಟ್‌ವರ್ತ್ ದಿನಾಂಕ:31.03.2022ರ ಅಂತ್ಯಕ್ಕೆ ರೂ.1133.04 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ದೃಢೀಕರಣ ಪತ್ರವನ್ನು ನೀಡಿರುತ್ತಾರೆ.

M/s Sri Kumaraswamy Mineral Exports Private Limited ಕಂಪನಿಯು 2.1 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಅರ್ಜಿ ಶುಲ್ಕ ಹಾಗೂ ಸಂಸ್ಕರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಸದರಿ ಕಂಪನಿಯವರು ಹಂಚಿಕೆಗಾಗಿ ಕೋರಿರುವ ಸ್ಥಳವು ಲಭ್ಯವಿರುತ್ತದೆ. ಸದರಿಯವರು ಯೋಜನೆಗೆ ಸಂಬಂಧಿಸಿದಂತೆ ಟೋಪೋಶೀಟ್ ಸಂಖ್ಯೆ:57 A/1 ರಲ್ಲಿ 01 ಸಂಖ್ಯೆಯ ವಿಂಡ್ ಟರ್ಬೈನ್ (2100 ಕಿ.ವ್ಯಾ. ಸಾಮರ್ಥ್ಯ) ಅಳವಡಿಸಲು ಪ್ರತಿ ಟರ್ಬೈನ್‌ಗೆ 5 ಎಕರೆಯಂತೆ ಒಟ್ಟು 05 ಎಕರೆ (1 No. of WTG X 5 Acres = 05 Acres) ಜಮೀನನ್ನು ಮಾತ್ರ ಉಪಯೋಗಿಸಿಕೊಳ್ಳಬಹುದಾಗಿದೆ ಎಂದು ಕೆ.ಆರ್.ಇ.ಡಿ.ಎಲ್. ನಿಯಮಿತವು ತಿಳಿಸಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Sri Kumaraswamy Mineral Exports Private Limited ಇವರು ಕೊಪ್ಪಳ ಜಿಲ್ಲೆಯ, ಕುಷ್ಟಗಿ ತಾಲ್ಲೂಕಿನ ಕಡೇಕೊಪ್ಪ ಗ್ರಾಮದಲ್ಲಿ State Grid ವರ್ಗದಡಿಯಲ್ಲಿ ಹಂಚಿಕೆಗಾಗಿ ಕೋರಿರುವ 2.1 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ

AFA 24/3

Wind Section
Inward No. 1988
Date 24/3/23
Sig.

MD KREDL

GM (Tech) KREDL 21/3

ಸ್ಥಳವು ಖಾಸಗಿ ಜಮೀನಾಗಿರುತ್ತದೆ. ಸದರಿಯವರು 2.1ಮೆ.ವ್ಯಾ ಸಾಮರ್ಥ್ಯದ 1 ವಿಂಡ್ ಟರ್ಬೈನ್ ನನ್ನು ಅಳವಡಿಸುತ್ತಿದ್ದು, ಅಳವಡಿಸುವ Wind Turbine ನ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಆದುದರಿಂದ ಸದರಿ ಅಭಿವೃದ್ಧಿದಾರರು ಅಳವಡಿಸುವ ಪ್ರತಿ ಟರ್ಬೈನ್ ನ footprint ಜಾಗಕ್ಕೆ 5 ಎಕರೆಗಳಂತೆ ಒಟ್ಟು 5 ಎಕರೆ (5 x 1 =5) ಜಮೀನನ್ನು ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಟೋಪೋಶೀಟ್ ಸಂಖ್ಯೆ:57A/1 ರಲ್ಲಿ ಉಪಯೋಗಿಸಕೊಳ್ಳಬಹುದಾಗಿದೆ ಹಾಗೂ ಸದರಿಯವರು ಅಳವಡಿಸುವ ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ (Micrositing Guidelines) ಅಳವಡಿಸ ಬೇಕಾಗಿರುತ್ತದೆ. ಆದ ಕಾರಣ ಯೋಜನೆಗೆ ಬೇಕಾಗುವ ಜಮೀನು ಪಡೆಯುವುದು ಮತ್ತು ಕೆಪಿಟಿಸಿಎಲ್‌ನಿಂದ Evacuation ನಿರಾಕ್ಷೇಪಣಾ ಪತ್ರ ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ. ಸದರಿಯವರು 2.1 ಮೆ.ವ್ಯಾ ಸಾಮರ್ಥ್ಯದಿಂದ ಉತ್ಪಾದಿಸುವ ವಿದ್ಯುತ್ತನ್ನು State Grid ವರ್ಗದಡಿಯಲ್ಲಿ 220/110/11 kV Pooling Substation of Suzlon Gujarat Wind Park Limited ಮುಖಾಂತರ KPTCL ನ 220 kV Kushtagi substation ಗೆ evacuate ಮಾಡುವುದಾಗಿ ತಿಳಿಸಿರುತ್ತಾರೆ.

ಮುಖ್ಯ ಇಂಜಿನಿಯರ್ (ಯೋಜನೆ ಮತ್ತು ಸಮನ್ವಯ), ಕೆಪಿಟಿಸಿಎಲ್ ನಿಯಮಿತವು ಸದರಿ ಯೋಜನೆಗೆ KPTCL ನಿಯಮಿತದ 220 kV Kushtagi substation ಇಂದ evacuation ಮಾಡಬಹುದಾಗಿದೆ ಎಂದು ತಿಳಿಸಿದರು. ಈ ಕೆಳಕಂಡ ಷರತ್ತುಗಳಿಗೊಳಪಟ್ಟು M/s Sri Kumaraswamy Mineral Exports Private Limited ಕಂಪನಿಗೆ 2.1 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ನೀಡಲು ಸಮಿತಿಯು ಸರ್ವಾನುಮತಿಯಿಂದ ಶಿಫಾರಸ್ಸು ಮಾಡಿರುತ್ತದೆ.

i. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ ನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು.
ii. ಸದರಿ ಯೋಜನೆಗೆ KPTCL ನಿಂದ evacuation ಅನುಮತಿ ಪಡೆದು ಅನುಷ್ಠಾನಗೊಳಿಸುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.
iii. ಈಗಾಗಲೇ ಇತರೆ ಅಭಿವೃಧ್ಧಿದಾರರುಗಳು ಹಂಚಿಕೆ ಅನುಮೋದನೆ ಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯ WTG Co-ordinates Overlap ಆಗಿದ್ದಲ್ಲಿ, ಅಂತಹ WTGs ಸಾಮರ್ಥ್ಯವು ರದ್ದುಗೊಳ್ಳುತ್ತದೆ.
iv. ಅಭಿವೃದ್ಧಿದಾರರು ಸದರಿ ಯೋಜನೆಯನ್ನು RE Policy 2022-27 ಹಾಗೂ ಸದರಿ ನೀತಿಗೆ ನೀಡಿದ ತಿದ್ದುಪಡಿ - 1 ರ ಪ್ರಕಾರ ಹಂಚಿಕೆ ಆದೇಶ ನೀಡಿದ ದಿನಾಂಕದಿಂದ 3 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಬೇಕಾಗುತ್ತದೆ.
v. ಹಂಚಿಕೆ ಆದೇಶ ನೀಡಿದ ದಿನಾಂಕದಿಂದ 45 ದಿನಗಳೊಳಗೆ ಪ್ರತೀ ಮೆ.ವ್ಯಾ ಗೆ ರೂ.5 ಲಕ್ಷದಂತೆ ನೆರವೇರಿಕೆ ಬ್ಯಾಂಕ್ ಖಾತರಿಯನ್ನು ಕ್ರೆಡೆಲ್ ಗೆ ಸಲ್ಲಿಸಿತಕ್ಕದ್ದು.
vi. ಸದರಿ ಯೋಜನೆಗೆ ಬೇಕಾಗುವ ಜಮೀನನ್ನು ಕಂದಾಯ ಇಲಾಖೆಯಿಂದ ನೇರವಾಗಿ ಗುತ್ತಿಗೆ ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.
vii. ಅಭಿವೃದ್ಧಿದಾರರು ಯೋಜನೆಗೆ ಅವಶ್ಯವಿರುವ ನಿರಾಕ್ಷೇಪಣಾ ಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸುವುದು.
viii. ಅಭಿವೃದ್ಧಿದಾರರು ಪವನ ವಿದ್ಯುತ್ ಯೋಜನೆಗೆ MNRE, New Delhi ಇವರ RLMM ಪಟ್ಟಿಯಲ್ಲಿರುವ WTGs ಉಪಯೋಗಿಸತಕ್ಕದ್ದು.

...3